ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಅರಣ್ಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 11/03/2020

# ವನ್ಯಜೀವಿ ದಾಳಿ: ಮೃತರಿಗೆ 10 ಲಕ್ಷ ಪರಿಹಾರ

ವಿಶ್ವವಾಣಿ 11/3/20



**ವಿಧಾನಸಭೆ:** ರಾಜ್ಯದಲ್ಲಿ ಆನೆ ಸೇರಿದಂತೆ ಇತರ ವನ್ಯ ಜೀವಿಗಳ ದಾಳಿಯಿಂದ ಮೃತಪಟ್ಟವರ ಕುಟುಂಬಗಳಿಗೆ ನೀಡುವ ಪರಿಹಾರದ ಮೊತ್ತವನ್ನು 7.5 ಲಕ್ಷದಿಂದ 10 ಲಕ್ಷಕ್ಕೆ ಏರಿಸುವ ಬಗ್ಗೆ ಸರಕಾರ ಚಿಂತನೆ ನಡೆಸಿದ್ದು, ಶೀಘ್ರದಲ್ಲೇ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಅರಣ್ಯ ಸಚಿವ ಆನಂದ್ ಸಿಂಗ್ ಹೇಳಿದರು.

ಶೂನ್ಯವೇಳೆಯಲ್ಲಿ ಕಾಡಾನೆ ದಾಳಿ ಕುರಿತ ಶಾಸಕರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಕಾಡಾನೆ ದಾಳಿ ಪ್ರಕರಣಗಳು ಇಳಿಮುಖವಾಗಿದೆ. ವನ್ಯಜೀವಿಗಳು ನಾಡಿಗೆ ಪ್ರವೇಶಿಸುವುದನ್ನು ತಡೆಯಲು ಸರಕಾರ ಅಗತ್ಯ ಕ್ರಮ ಕೈಗೊಂಡಿದೆ. ಈಗಾಗಲೇ ಪರಿಹಾರದ ಮೊತ್ತವನ್ನು 5 ಲಕ್ಷ ರು.ಗಳಿಂದ 7.5 ಲಕ್ಷ ರು.ಗಳಿಗೆ ಹೆಚ್ಚಿಸಲಾಗುವುದು. ಮೃತರ ಕುಟುಂಬಗಳಿಗೆ ಈಗಾಗಲೇ ನೀಡಲಾಗುತ್ತಿರುವ ಐದು ವರ್ಷಗಳ ಅವಧಿಗೆ ನೀಡುವ ಮಾಶಾಸನವನ್ನು ಎರಡರಿಂದ ಐದು ಸಾವಿರಕ್ಕೆ ಏರಿಸುವ ಪ್ರಸ್ತಾಪವಿದ್ದು, ಆರ್ಥಿಕ ಇಲಾಖೆಗೆ ಕಳುಹಿಸಲಾಗಿದೆ ಎಂದು ವಿವರಿಸಿದರು. ಇದಕ್ಕೂ ಮುನ್ನ ಮಾತನಾಡಿದ ಶಾಸಕ ಎ.ಟಿ. ರಾಮಸ್ವಾಮಿ, ಕಾಡಾನೆಗಳ ನಿರಂತರ ಉಪಟಳದಿಂದ ಅರಣ್ಯದ ಸಮೀಪದ ಹಳ್ಳಿಗಳ ರೈತರು ಬಸವಳಿದಿದ್ದಾರೆ. ಅನೇಕ ಕಡೆ ಜೀವಹಾನಿ ಸಂಭವಿಸಿದೆ. ಕಾಡಿನಲ್ಲಿ ಕುಡಿಯುವ ನೀರು ಮತ್ತು ಆಹಾರದ ಕೊರತೆ ಹೆಚ್ಚಾಗಿದ್ದು, ವನ್ಯಜೀವಿಗಳು ನಾಡಿನ ಕಡೆಗೆ ಬರುವ ಭೀತಿ ಹೆಚ್ಚಾಗಿದೆ. ಇದನ್ನು ತಡೆಯಲು ಸರಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಶಾಸಕ ಅಪ್ಪಚ್ಚು ರಂಜನ್ ಮಾತನಾಡಿ, ಕೊಡಗು ಜಿಲ್ಲೆಯಲ್ಲಿ ಕೂಡ ಆನೆಗಳ ಹಾವಳಿ ಮುಂದುವರಿದಿದೆ. ಅವುಗಳನ್ನು ಹಿಡಿಯಲು ಅರಣ್ಯ ಇಲಾಖೆ ಕಂದಕಗಳನ್ನು ನಿರ್ಮಿಸಿದೆಯಾದರೂ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿಲ್ಲ ಎಂದರು.